ಧಾರವಾಡ ಜಿಲ್ಲೆಯಲ್ಲಿ ಅಂಗನವಾಡಿ ಕೇಂದ್ರಗಳು :

462 (5120) ಶ್ರೀ ಅಕ್ಕಿಮಲ್ಲಿಕಾರ್ಜುನ ಸಹದೇವಪ್ಪ (ಕುಂದಗೋಳ) :- ಮಾನ್ಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಧಾರವಾಡ ಜಿಲ್ಲೆಯಲ್ಲಿ ಪ್ರತಿವರ್ಷ ಅಂಗನವಾಡಿ ಕೇಂದ್ರಗಳಿಗೆ ಖರ್ಚು ಮಾಡುವ ಹಣ ಎಷ್ಟು;

ಆ) ಧಾರವಾಡ ಜಿಲ್ಲೆಯ ಅಂಗನವಾಡಿ ಕೇಂದ್ರಗಳ ಅವ್ಯವಹಾರದ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಬಂದಿದ್ದಲ್ಲಿ, ಸರ್ಕಾರ ಇದುವರೆವಿಗೂ ತೆಗೆದುಕೊಂಡಿರುವ ಕ್ರಮಗಳೇನು; (ವಿವರಗಳನ್ನು ಒದಗಿಸುವುದು)?

ಶ್ರೀಮತಿ ಭಾಗೀರಥಿ ಮರಳುಸಿದ್ದನಗೌಡ (ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು) :

ಅ) 2004-05ನೇ ಸಾಲಿನಲ್ಲಿ ಧಾರವಾಡ ಜಿಲ್ಲೆಯ ಅಂಗನವಾಡಿ ಕೇಂದ್ರಗಳಿಗೆ ಖರ್ಚು ಮಾಡಿದ ಹಣದ ವಿವರ ಈ ಕೆಳಗಿನಂತಿದೆ :

1) ಸಿಬ್ಬಂದಿ ವೇತನ ರೂ. 297.04 ಲಕ್ಷ

2) ಪೌಷ್ಟಿಕ ಆಹಾರ ರೂ. 260.40 ಲಕ್ಷ

3) ಗೌರವಧನ : ರೂ. 59.56 ಲಕ್ಷ

ಆ) ಇಲ್ಲ.

ಇ) ಅನ್ವಯಿಸುವುದಿಲ್ಲ.

ಮದ್ದೂರು ತಾ : ನಿಡಘಟ್ಟ ಗ್ರಾಮದಲ್ಲಿ ಉಪಮಾರುಕಟ್ಟೆ ಮಂಜೂರಾತಿ :

463 (5117) ಶ್ರೀ ಡಿ.ಸಿ. ತಮ್ಮಣ್ಣ (ಮದ್ದೂರು) :- ಮಾನ್ಯ ಕೃಷಿ ಮಾರುಕಟ್ಟೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮದ್ದೂರು ತಾಲ್ಲೂಕು ನಿಡಘಟ್ಟ ಗ್ರಾಮದಲ್ಲಿ ಕೃಷಿ ಉಪ ಮಾರುಕಟ್ಟೆ ಗ್ರಾಮೀಣ ಸಂತೆ ನಿರ್ಮಿಸಲು ಬೇಡಿಕೆ ಸರ್ಕಾರದ ಮುಂದೆ ಇದೆಯೇ;

ಆ) ಹಾಗಿದ್ದಲ್ಲಿ, ಕೃಷಿ ಉಪ ಮಾರುಕಟ್ಟೆ ನಿರ್ಮಿಸಲು ಸರ್ಕಾರ ಕ್ರಮ ಕೈಗೊಂಡಿದೆಯೇ;

ಶ್ರೀ ಪ್ರಕಾಶ್ ಬಾ. ಹುಕ್ಕೇರಿ (ಕೃಷಿ ಮಾರುಕಟ್ಟೆ ಸಚಿವರು) :

ಅ) ಹೌದು.

ಆ) ನಿಡಘಟ್ಟ ಗ್ರಾಮದಲ್ಲಿ ಉಪ ಮಾರುಕಟ್ಟೆ ಪ್ರಾಂಗಣ ಅಭಿವೃದ್ಧಿಪಡಿಸಲು ಸರ್ವೆ ನಂ.17ರಲ್ಲಿನ 1.30 ಎಕರೆ ಜಮೀನನ್ನು ಮಂಜೂರಾತಿ ಮಾಡುವ ಸಂಬಂಧ ಜಿಲ್ಲಾಧಿಕಾರಿಗಳು, ಮಂಡ್ಯ ಇವರು ಸರ್ಕಾರದ ಕಂದಾಯ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಿದ್ದು, ಮಂಜೂರಾತಿ ದೊರೆತ ನಂತರ ಉಪ ಮಾರುಕಟ್ಟೆ ಪ್ರಾಂಗಣವನ್ನು ಅಭಿವೃದ್ಧಿಪಡಿಸುವ ಕುರಿತು ಸೂಕ್ತ ಕ್ರಮ ಜರುಗಿಸಲಾಗುವುದು.

ನಿಡಘಟ್ಟ ಗ್ರಾಮದಲ್ಲಿ ಹಾಲಿ ನಡೆಯುತ್ತಿರುವ ಸಂತೆಯನ್ನು ಅಭಿವೃದ್ಧಿಪಡಿಸಲು ಆರ್.ಐ.ಡಿ.ಎಫ್– XI ಯೋಜನೆಯಡಿಯಲ್ಲಿ ಪ್ರಸ್ತಾಪಿಸಿದ್ದು, ನಬಾರ್ಡ್ ಸಂಸ್ಥೆಯಿಂದ ಮಂಜೂರಾತಿ ದೊರೆತ ನಂತರ ಅಭಿವೃದ್ಧಿಪಡಿಸಲು ಅಗತ್ಯ ಕ್ರಮ ಜರುಗಿಸಲಾಗುವುದು.

<u>ಪಡಿತರ ಚೀಟಿಯಲ್ಲಿ ನ್ಯೂನತೆಗಳು</u> :

464 (5017) ಶ್ರೀ ಕ್ಯಾತಸಂದ್ರ ಎನ್. ರಾಜಣ್ಣ :– ಮಾನ್ಯ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಒಟ್ಟು ಪಡಿತರ ಚೀಟಿ ಹೊಂದಿರುವ ಫಲಾನುಭವಿಗಳ ಸಂಖ್ಯೆ ಎಷ್ಟು;

ಆ) ತುಮಕೂರು ಜಿಲ್ಲೆಯಲ್ಲಿ ಒಟ್ಟು ಪಡಿತರ ಚೀಟಿ ಹೊಂದಿರುವವರ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು);

ಇ) ತುಮಕೂರು ಜಿಲ್ಲೆಯಲ್ಲಿ ಪಡಿತರ ವ್ಯವಸ್ಥೆಯಲ್ಲಿ ನಿಯಮವನ್ನು ಉಲ್ಲಂಘಿಸಿದ ನ್ಯಾಯ ಬೆಲೆ ಅಂಗಡಿಗಳ ಮೇಲೆ ತೆಗೆದುಕೊಂಡ ಕ್ರಮಗಳೇನು (ವಿವರಗಳನ್ನು ನೀಡುವುದು)?

ಶ್ರೀ ಹೆಚ್.ಎಸ್. ಮಹದೇವಪ್ರಸಾದ (ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು) :

ಅ) ರಾಜ್ಯದಲ್ಲಿ ಜೂನ್ 2005ರ ಅಂತ್ಯಕ್ಕೆ ಇರುವ ಪಡಿತರ ಚೀಟಿಗಳ ವಿವರಗಳು ಕೆಳಕಂಡಂತಿರುತ್ತದೆ :

1) ಎಎವೈ ಪಡಿತರ ಚೀಟಿ	950000
2) ಹಳದಿ ಪಡಿತರ ಚೀಟಿ	6074986
3) ಎಪಿಎಲ್ ಪಡಿತರ ಚೀಟಿ	4267363